ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂ.DTE-ADMI0AC[illegible]8/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:08-10-2020.

**-:: ಸು ತ್ತೋಲೆ ::-**

ವಿಷಯ: 2019-20ನೇ ಸಾಲಿನಲ್ಲಿ ಪ್ರಥಮ ಡಿಪ್ಲೋಮಾ ಪ್ರವೇಶ ಸಂಬಂಧ ಭರ್ತಿ ಆಗದ ಸೀಟುಗಳನ್ನು ಆಫ್-ಲೈನ್ ಮೂಲಕ **ಸಾಮಾನ್ಯ ವರ್ಗದಡಿ ಸೀಟು ಹಂಚಿಕೆ ಮಾಡಲು ಅವಧಿ ವಿಸ್ತರಿಸುವ ಕುರಿತು.**

ಉಲ್ಲೇಖ:
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. DTE-ADMI0ACM2/8/2020, ದಿನಾಂಕ: 04-08-2020.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:02-09-2020.
3. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:22-09-2020.

-000000-

2020-21ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(2)ರ ಸುತ್ತೋಲೆಯಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ಪ್ರವೇಶ ಅರ್ಜಿಗಳನ್ನು ನೀಡುವ ಹಾಗೂ ಸ್ವೀಕರಿಸುವ ಸಂಬಂಧ ಅಂತಿಮ ದಿನಾಂಕವನ್ನು 30-09-2020 ಎಂದು ನಿಗದಿಪಡಿಸಿ, ದಿ:03-10-2020ರಂದು ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ರೋಸ್ಟರ್ ಅನುಗುಣವಾಗಿ ನಿಯಮಗಳನ್ನು ಪಾಲಿಸಿ ಆಯಾ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರ ಹಂತದಲ್ಲಿಯೇ ತುಂಬಲು ಅನುಮತಿ ನೀಡಲಾಗಿತ್ತು.

ಆಫ್-ಲೈನ್ ಕೌನ್ಸಲಿಂಗ್ ಸೀಟು ಹಂಚಿಕೆ ಮುಗಿದ ನಂತರ ಭರ್ತಿ ಆಗದ ಉಳಿಕೆ ಸೀಟುಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ **ದಿನಾಂಕ:15-10-2020ರ ಒಳಗೆ ಪ್ರವೇಶಾತಿಯನ್ನು ನೀಡಲು ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

*ಭರ್ತಿ ಆಗದ ಉಳಿಕೆ ಸೀಟುಗಳಿಗೆ ಮಾತ್ರ ಅನ್ವಯವಾಗುವಂತೆ (ಎಸ್.ಎನ್.ಕ್ಯೂ ಸೀಟು ಹೊರತುಪಡಿಸಿ) ಪ್ರವೇಶ ಬಯಸಿ ಮೊದಲು ಬಂದವರಿಗೆ ಮೊದಲ ಆದ್ಯತೆ ನೀಡಿ ಆಯಾ ದಿನವೇ ಸಾಮಾನ್ಯ ವರ್ಗದಡಿ ಆಫ್-ಲೈನ್ ಮುಖಾಂತರ ಸೀಟು ಹಂಚಿಕೆ ಮಾಡಿ, ನಿಗಧಿತ ಪ್ರವೇಶ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.*

ಮೇಲೆ ನಮೂದಿಸಿರುವಂತೆ ಇಂದೇ / ಕೂಡಲೇ ಕ್ರಮ ತೆಗೆದುಕೊಂಡು ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ದಿ:15-10-2020ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಆಫ್-ಲೈನ್ ಮುಖಾಂತರ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ.

ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

* ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು

ಗೆ,
*ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*